## 49. ಗರೀಬ್ ಕಲ್ಯಾಣ ಯೋಜನೆಗೆ ಪ್ರಧಾನಿ ಚಾಲನೆ

ಕೊರೊನಾ ಲಾಕ್‌ಡೌನ್ ಹಿನ್ನೆಲೆಯಲ್ಲಿ ಸಂಕಷ್ಟಕ್ಕೆ ಸಿಲುಕಿ ನಗರಗಳಿಂದ ಸ್ವಗ್ರಾಮಗಳಿಗೆ ಹಿಂದಿರುಗಿರುವ ಲಕ್ಷಾಂತರ ವಲಸಿಗ ಕಾರ್ಮಿಕರಿಗೆ ಉದ್ಯೋಗ ನೀಡುವ ನಿಟ್ಟಿನಲ್ಲಿ ರೂಪಿಸಿರುವ ಬೃಹತ್ ಯೋಜನೆ 'ಗರೀಬ್ ಕಲ್ಯಾಣ್ ರೋಜ್‌ಗಾರ್ ಅಭಿಯಾನ'ಕ್ಕೆ ಪ್ರಧಾನಿ ನರೇಂದ್ರ ಮೋದಿ ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಿದ್ದಾರೆ. ರೂ.50 ಸಾವಿರ ಕೋಟಿ ಮೊತ್ತದ ಯೋಜನೆ ಇದಾಗಿದೆ.

ಬಿಹಾರದ ಖಗೇರಿಯಾ ಜಿಲ್ಲೆಯ ತೆಲಿಹಾರ್ ಗ್ರಾಮದಿಂದ ಯೋಜನೆಗೆ ಚಾಲನೆ ನೀಡಲಾಗಿದೆ. ಲಾಕ್‌ಡೌನ್ ಬಳಿಕ ನಗರಗಳಿಂದ ಗ್ರಾಮಗಳಿಗೆ ಹೆಚ್ಚು ಕಾರ್ಮಿಕರು ಹಿಂದಿರುಗಿರುವ ಒಟ್ಟು 6 ರಾಜ್ಯಗಳ (ಬಿಹಾರ, ಉತ್ತರ ಪ್ರದೇಶ, ಮಧ್ಯಪ್ರದೇಶ, ಜಾರ್ಖಂಡ್, ಒಡಿಶಾ ಮತ್ತು ರಾಜಸ್ಥಾನ) 116 ಜಿಲ್ಲೆಗಳಲ್ಲಿ ಈ ಯೋಜನೆ ಕೈಗೊಳ್ಳಲಾಗುತ್ತದೆ. 125 ದಿನಗಳ ಕಾಲ ಕಾರ್ಮಿಕರಿಗೆ ವಿವಿಧ ಕ್ಷೇತ್ರಗಳಲ್ಲಿ ಅವರವರ ಗ್ರಾಮ, ಮನೆಗಳ ಸಮೀಪವೇ ಉದ್ಯೋಗ ಕಲ್ಪಿಸಲಾಗುತ್ತದೆ. ಯಾವ ಜಿಲ್ಲೆಗಳಿಗೆ ನಗರಗಳಿಂದ ಹೆಚ್ಚು ವಲಸಿಗರು ವಾಪಾಸ್ ಆಗಿದ್ದಾರೆ ಎಂಬ ಅಂಕಿ ಅಂಶಗಳನ್ನು ಪರಿಗಣಿಸಿ ಯೋಜನೆಗೆ ಜಿಲ್ಲೆಗಳನ್ನು ಆಯ್ಕೆ ಮಾಡಲಾಗಿದೆ. ಆಯ್ಕೆಯಾಗಿರುವ 116 ಜಿಲ್ಲೆಗಳಲ್ಲಿ ಅತೀ ಹೆಚ್ಚು ಅಂದರೆ 32 ಬಿಹಾರದಲ್ಲಿವೆ. ಉತ್ತರ ಪ್ರದೇಶದ 31, ಮಧ್ಯಪ್ರದೇಶದ 24, ರಾಜಾಸ್ಥಾನದ 22, ಒಡಿಶಾದ 4 ಹಾಗೂ ಜಾರ್ಖಂಡ್‌ನ 3 ಜಿಲ್ಲೆಗಳು ಪಟ್ಟಿಯಲ್ಲಿವೆ. ಈ ಜಿಲ್ಲೆಗಳಿಗೆ ದೇಶದ ಪ್ರಮುಖ ನಗರಗಳು ಹಾಗೂ ಹೊರ ರಾಜ್ಯಗಳಿಂದ ಸುಮಾರು 88 ಲಕ್ಷಕ್ಕೂ ಅಧಿಕ ಕಾರ್ಮಿಕರು ಲಾಕ್‌ಡೌನ್‌ನಿಂದ ಉದ್ಯೋಗ ಕಳೆದುಕೊಂಡು ಮರಳಿದ್ದಾರೆ.

ಗರೀಬ್ ಕಲ್ಯಾಣ ಅಡಿಯಲ್ಲಿ ಕೇಂದ್ರ ಸರ್ಕಾರದ ಮಹತ್ವದ ಯೋಜನೆಗಳು ಸೇರಿ ಸುಮಾರು 25 ಕ್ಷೇತ್ರಗಳಲ್ಲಿ ಉದ್ಯೋಗಗಳನ್ನು ಸೃಷ್ಟಿ ಮಾಡಲಾಗುತ್ತದೆ. ಗ್ರಾಮೀಣ ವಸತಿ, ತೋಟಗಾರಿಕೆ, ನೀರಿನ ಸಂರಕ್ಷಣೆ, ಅಂಗನವಾಡಿ ಕಟ್ಟಡಗಳ ನಿರ್ಮಾಣ, ಜಲ–ಜೀವನ್ ಮಿಷನ್ ಕಾಮಗಾರಿ, ರಸ್ತೆಗಳ ನಿರ್ಮಾಣ ಮಾಡಲಾಗುತ್ತದೆ. ಮಾರ್ಚ್‌ನಲ್ಲಿ ಘೋಷಿಸಿದ್ದ ರೂ.1.70 ಲಕ್ಷ ಕೋಟಿ ಪ್ಯಾಕೇಜ್‌ನ ಅಡಿಯಲ್ಲಿ ಈವರೆಗೆ 42 ಕೋಟಿ ಬಡವರು ರೂ.65,454 ಕೋಟಿ ಪರಿಹಾರ ಪಡೆದಿದ್ದಾರೆ.

ವಲಸಿಗ ಕಾರ್ಮಿಕರಿಗಾಗಿ ಜಾರಿಗೊಳಿಸಲಾಗಿರುವ ಈ ಯೋಜನೆಗೆ ಕಾರ್ಮಿಕರೇ ಸ್ಫೂರ್ತಿ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಭಾರತದ ಹಳ್ಳಿಗಳು ಕೊರೋನಾವನ್ನು ಎದುರಿಸಿದ ರೀತಿ ನಗರಗಳಿಗೆ ಮಾದರಿಯಾಗಿದೆ. ಸೋಂಕು ಪಸರಿಸುವಿಕೆಯನ್ನು ಹಳ್ಳಿಗಳ ಜನರು ಅತ್ಯಂತ ಪರಿಣಾಮಕಾರಿಯಾಗಿ ತಡೆಗಟ್ಟಿದ್ದಾರೆ. ದೇಶದ ಸುಮಾರು 80ರಿಂದ 85 ಕೋಟಿ ಜನಸಂಖ್ಯೆ ಹಳ್ಳಿಗಳಲ್ಲಿ ವಾಸಿಸುತ್ತದೆ. ಇದು ಇಡೀ ಯುರೋಪ್, ಅಮೆರಿಕಾ, ರಷ್ಯಾ ಮತ್ತು ಆಸ್ಟ್ರೇಲಿಯಾದ ಜನಸಂಖ್ಯೆಗಿಂತ ಹೆಚ್ಚು. ಇಷ್ಟು ಪ್ರಮಾಣದ ಜನಸಂಖ್ಯೆ ಕೊರೋನಾ ವಿರುದ್ಧ ಹೋರಾಡುವುದು ನಿಜಕ್ಕೂ ದೊಡ್ಡ ಸವಾಲು ಎಂದು ಮೋದಿ ತಿಳಿಸಿದ್ದಾರೆ.

ಆಧಾರ:ವಿಜಯವಾಣಿ, ದಿನಾಂಕ: 21.06.2020